ಕೋಲಾರ ಡಿಸ್ಟ್ರಿಕ್ಟ್.

ತಾರೀಖು 27ನೆ ಮಾಹೆ ಸಪ್ಟಂಬರ್ 1907.

ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಕಾಯಂ ಗುತ್ತಾದಾರರಿಂದ ಸರ್ಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತಿ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಕಾಯಂಗುತ್ತಾಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಯೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತ. ಕ್ರಯದ ಮೊಬಲಗು ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯಿತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವಲ್ ಕ್ರಯದಾರನ ಕರ್ಚಿನಲ್ಲಿ ವ ನುಕ್ಸಾನಾಗಿ ಮರ್ಜಿ ಹರಾಜ್ ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರ್ಫೆ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲೀ ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲ್ಲಿ, ಹರಾಜ್ ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖಿಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಅಥವಾ ಮೈಸೂರು ಲ್ಯಾಂಡ್ ರೆವಿನ್ಯೂ ಕೋಡಿನ 170ನೆ ಸೆಕ್ಷನ್ ಅನುಸಾರವಾಗಿ ಜಾಮೀನು ಕೊಟ್ಟಾಗ್ಯೂ ಹರಾಜು ಮವಕೂಫ್ ಮಾಡಲ್ಪಡತಕ್ಕದ್ದು.

7. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜು ಖಾಯಂ ಮಾಡಲ್ಪಟ್ಟ ಕೂಡ್ಲೆ ಗ್ರಾಮವು ಆತನ ಸುಪರ್ದಿ ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರು ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲಿನಲ್ಲಾಗಲೀ ಅಂದಾಜಾ ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬುದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

8. ಪರಂತು, ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 90 ದಿನಗಳೊಳಗಾಗಿ ಗವರ್ನ್‌ಮೆಂಟಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂತಾ ಅಪ್ಪೀಲ್‌ನಲ್ಲಿ ಆಗುವ ಆಜ್ಞೆರು ಹುಕುಮಿಗೆ ಸದರೀ ಕ್ರಯವು ವಳಪಟ್ಟು ಇರುತ್ತೆ.

ಡಿಸ್ಟ್ರಿಕ್ಟು	ತಾಲ್ಲೂಕು.	ಹೋಬ್ಳಿ.	ಗ್ರಾಮ.	ಜೋಡೀ ಕಾಯಂ ಗುತ್ತಾದಾರರ ಹೆಸರು.	ಅಂದಾಜಾ ಬೀಜ ನರಿ.	ಅಂದಾಜಾ ಹುಟ್ಟುವಳಿ ಬೀರಿಜು.	ಸಾಲಿಯಾನಾ ಕಂದಾಯ ಬೀಕಾಯ್ದೆ ರಿಂದ.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಆಂತಾ ಸರ್ಕಾರದ ಕಂದಾಯದ ಬಾಕಿ.	ಹರಾಜು ತಾರೀಖು.
					ಎ. ಗು.	ರೂ. ಆ.	ರೂ. ಆ. ಪೈ.	ರೂ. ಆ. ಪೈ.	
ಕೋಲಾರ.	ಚಿಕ್ಕಬಳ್ಳಾಪುರ.	ಮಂಡಿಕಲ್.	ಕಾಯಂಗುತ್ತಾ ಚೇಗಾನಹಳ್ಳಿ.	1. ಬಳಿನಂದರ್ ವರದಾಚಾರ್. 2. ಶ್ರೀರಂಗಾಚಾರ್.	ಪರಂಪೋಕು. 490 3 ಖುಷ್ಕಿ ... 495 9 ತರಿ ... 115 1 ಬಾಗಾಯಿತು. 27 35 1,128 8	696 4	582 0 0	752 9 0	ತಾರೀಖು 7ನೆ ನವೆಂಬರ್ 1907, ಚಿಕ್ಕಬಳ್ಳಾಪುರ ತಾಲ್ಲೂಕು ಕಚೇರಿ.

ಗ್ರಾಮಕ್ಕೆ ಚಕ್ಕುಬಂದಿ.

ಪೂರ್ವಕ್ಕೆ — ಜೋಡಿ ಕಮ್ಮಗಾನಹಳ್ಳಿ.
ಪಶ್ಚಿಮಕ್ಕೆ — ಬತ್ತಲ ಬೈರಪ್ಪನ ದಿನ್ನೆ.
ಉತ್ತರಕ್ಕೆ — ಎಲಕರಾಳಹಳ್ಳಿ, ಚೊಕ್ಕಹಳ್ಳಿ ಮತ್ತು ನಾರೇನಹಳ್ಳಿ ಜೋಡಿ.
ದಕ್ಷಿಣಕ್ಕೆ — ಮಂಡಿಕಲ್ ಮತ್ತು ನಾಲಾ.

ಪರಾ — ಕಾಯಂಗುತ್ತಾದಾರರುಗಳಿಂದ ಆಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆ ಯಿದ್ದವರಿಂದಾಗಲಿ ಉಂಟುಮಾಡಲ್ಪಟ್ಟ ತಪಾಂ ಹಿಡುವಳಿಗಾಗಲಿ ದೇಣಿಗಳಿಗಾಗಲಿ ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ತ್ಯಾವ ಸಂಬಂಧಗಳಿಗಾಗಲಿ ಸದರಿ ಹರಾಜು ವಳಪಟ್ಟಿರುವದಿಲ್ಲ.

ಬಿ. ವೆಂಕೋಬರಾವ್,
ಫಾರ್ ಡೆಪ್ಯುಟಿ ಕಮಿಷನರ್.